# ಕರ್ನಾಟಕ ವಿಧಾನ ಪರಿಷತ್ತು

1. ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 561
2. ಸದಸ್ಯರ ಹೆಸರು : ಶ್ರೀ ಟಿ.ಎ. ಶರವಣ
3. ಉತ್ತರಿಸುವ ದಿನಾಂಕ : 11.07.2023
4. ಉತ್ತರಿಸುವ ಸಚಿವರು : ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ಹಾಗೂ ಕೃಷಿ ಮಾರುಕಟ್ಟೆ ಸಚಿವರು

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| (ಅ) | ರಾಜ್ಯದಲ್ಲಿ ಎಪಿಎಂಸಿ ವ್ಯವಸ್ಥೆಯನ್ನು ದುರ್ಬಲಗೊಳಿಸಿ ಹಿಂದಿನ ಸರ್ಕಾರ ಜಾರಿ ಮಾಡಿದ್ದ ಕಾಯ್ದೆಯನ್ನು ರದ್ದು ಮಾಡುವ ಉದ್ದೇಶವಿದೆಯೇ ಅಥವಾ ಹಳೆಯ ವ್ಯವಸ್ಥೆಯನ್ನೇ ಉಳಿಸಿಕೊಳ್ಳಲು ಸರ್ಕಾರ ಉದ್ದೇಶಿಸಿದೆಯೇ; | ರಾಜ್ಯ ಸರ್ಕಾರವು ಮಾರುಕಟ್ಟೆ ಪ್ರಾಂಗಣಗಳ ಹೊರಗಡೆ ಮಾರುಕಟ್ಟೆ ಕ್ಷೇತ್ರದಲ್ಲಿ ನಡೆಯುವ ವ್ಯಾಪಾರ ವಹಿವಾಟಿನ ಮೇಲೆ ಈ ಮೊದಲಿನಂತೆ ನಿಯಂತ್ರಣವನ್ನು ಹೊಂದುವುದು ರೈತ ಬೆಳೆಗಾರರ ಹಿತದೃಷ್ಟಿಯಿಂದ ಅವಶ್ಯಕತೆ ಇರುವುದನ್ನು ಪರಿಗಣಿಸಿ, ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ರ ಕಲಂ 8(1)(ಬಿ), ಕಲಂ 8(2), ಕಲಂ 8(3) ಹಾಗೂ ಕಲಂ 117ಕ್ಕೆ ತಿದ್ದುಪಡಿ ಮಾಡಲು ದಿನಾಂಕ:15.06.2023 ರಂದು ಸಚಿವ ಸಂಪುಟದ ಅನುಮೋದನೆ ದೊರೆತಿರುತ್ತದೆ. |
| (ಆ) | ಹೊಸ ಎಪಿಎಂಸಿ ಕಾಯ್ದೆಯನ್ನು ಜಾರಿಗೆ ತರಲು ಉದ್ದೇಶಿಸಿದ್ದಲ್ಲಿ ಹೊಸ ಎಪಿಎಂಸಿ ಕಾಯ್ದೆಯ ಮುಖ್ಯಾಂಶಗಳೇನು; ಹೊಸ ಕಾಯ್ದೆಯನ್ನು ಯಾವ ಕಾಲಮಿತಿಯಲ್ಲಿ ಜಾರಿಗೊಳಿಸಲಾಗುವುದು; (ಸಂಪೂರ್ಣ ವಿವರ ನೀಡುವುದು) | ರಾಜ್ಯ ಸರ್ಕಾರವು ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ರ ಕಲಂಗಳಿಗೆ ತಿದ್ದುಪಡಿ ಮಾಡುವ ಕುರಿತು ಪ್ರಸ್ತಾಪಿಸಿದ್ದು, ಅದರ ಮುಖ್ಯಾಂಶಗಳು ಕೆಳಗಿನಂತಿಗೆ;<br><br>1. **ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ರ ಕಲಂ 8(1)(ಬಿ)ಕ್ಕೆ ತಿದ್ದುಪಡಿ**:<br>ಕಾಯ್ದೆ ಕಲಂ 8 ಕೃಷಿ ಉತ್ಪನ್ನಗಳ ಮಾರಾಟ ನಿಯಂತ್ರಣಕ್ಕೆ ಸಂಬಂಧಿಸಿದ್ದು ಹಾಗೂ ಉಪ ಪ್ರಕರಣ (ಬಿ) ರಡಿ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ನೀಡುವ ಲೈಸೆನ್ಸ್‌ನ ಷರತ್ತಿಗೊಳಪಟ್ಟು ಅಧಿಸೂಚಿತ ಕೃಷಿ ಉತ್ಪನ್ನಗಳಲ್ಲಿ ವ್ಯವಹರಿಸಬೇಕೆಂದು ನಿಬಂಧನೆ ಇರುತ್ತದೆ.<br><br>ಕಾಯ್ದೆ ಕಲಂ 72(4) ರಡಿ ನಿರ್ದೇಶಕರು, ಕೃಷಿ ಮಾರಾಟ ಇಲಾಖೆ ಅಥವಾ ಅವರಿಂದ ಪ್ರಾಧಿಕರಿಸಲ್ಪಟ್ಟ ಅಧಿಕಾರಿಗಳು ಖರೀದಿದಾರರ ಲೈಸೆನ್ಸ್ ನೀಡಲು ಅಧಿಕಾರ ಹೊಂದಿರುತ್ತಾರೆ.<br><br>ಕಲಂ 72(4)ನ್ನು ಪರಿಣಾಮಕಾರಿಗೊಳಿಸಲು ನಿರ್ದೇಶಕರು ಅಥವಾ ಅವರಿಂದ ಪ್ರಾಧಿಕರಿಸಲ್ಪಟ್ಟ ಅಧಿಕಾರಿ ಎಂದು ಕಾಯ್ದೆ ಕಲಂ 8(1)(ಬಿ)ಗೆ ಸೇರ್ಪಡೆಗೊಳಿಸಲು ತಿದ್ದುಪಡಿಯನ್ನು ಪ್ರಸ್ತಾಪಿಸಲಾಗಿದೆ.<br><br>2. **ಕಾಯ್ದೆ ಕಲಂ 8(2)ಕ್ಕೆ ತಿದ್ದುಪಡಿ**:-<br><br>ಕಲಂ 8(2) ರಡಿ ಅಧಿಸೂಚಿತ ಕೃಷಿ ಉತ್ಪನ್ನಗಳ ಸಗಟು ವ್ಯಾಪಾರ ವಹಿವಾಟನ್ನು ಮಾರುಕಟ್ಟೆ ಪ್ರಾಂಗಣ, ಮಾರುಕಟ್ಟೆ ಉಪ ಪ್ರಾಂಗಣ, ಉಪ |

| | | |
|---|---|---|
| | | ಮಾರುಕಟ್ಟೆ ಪ್ರಾಂಗಣ, ಖಾಸಗಿ ಮಾರುಕಟ್ಟೆ ಪ್ರಾಂಗಣ ಅಥವಾ ರೈತ-ಗ್ರಾಹಕ ಮಾರುಕಟ್ಟೆ ಪ್ರಾಂಗಣಗಳಲ್ಲಿಯೇ ಕಡ್ಡಾಯವಾಗಿ ಖರೀದಿ ಹಾಗೂ ಮಾರಾಟ ಪ್ರಕ್ರಿಯೆ ನಡೆಸಬೇಕೆಂದು ಹಾಗೂ ಯಾವುದೇ ಇತರೆ ಸ್ಥಳವನ್ನು ಅಧಿಸೂಚಿತ ಕೃಷಿ ಉತ್ಪನ್ನಗಳ ಮಾರಾಟ ಹಾಗೂ ಖರೀದಿಗಾಗಿ ಉಪಯೋಗಿಸತಕ್ಕದ್ದಲ್ಲ ಎಂದು ತಿದ್ದುಪಡಿಗೆ ಪ್ರಸ್ತಾಪಿಸಲಾಗಿದ್ದು, ಈ ಕ್ರಮವು ಮಾರುಕಟ್ಟೆ ಪ್ರಾಂಗಣಗಳಲ್ಲಿನ ವರ್ತಕ ಸಮುದಾಯದ ಬೇಡಿಕೆಗಳನ್ನು ಮತ್ತು ರೈತರ ಹಿತಾಸಕ್ತಿಗಳನ್ನು ರಕ್ಷಿಸಲು ಸಾಧ್ಯವಾಗುತ್ತದೆ.<br><br>3. **ಕಾಯ್ದೆ ಕಲಂ 8(3) ತಿದ್ದುಪಡಿ**:-<br>ಕಾಯ್ದೆ ಕಲಂ 8(3) ರಡಿಯಲ್ಲಿ ಕಾಯ್ದೆ ಕಲಂ 8(2)ರ ಅಡಿಯಲ್ಲಿ ವಿಧಿಸಲಾದ ನಿರ್ಬಂಧಗಳಿಗೆ ಕೆಲವು ವಿನಾಯಿತಿಗಳನ್ನು ನೀಡಲಾಗಿದ್ದು, ಮಾರುಕಟ್ಟೆ ಪ್ರದೇಶದಲ್ಲಿ ಅಧಿಸೂಚಿತ ಕೃಷಿ ಉತ್ಪನ್ನಗಳನ್ನು ನಿಯಂತ್ರಿಸುವ ಸಮಿತಿಯ ಅಧಿಕಾರವನ್ನು ಮರುಸ್ಥಾಪಿಸುವ ಪರಿಣಾಮವಾಗಿ, ತಿದ್ದುಪಡಿಯನ್ನು ಪ್ರಸ್ತಾಪಿಸಲಾಗಿದೆ.<br><br>4. **ಕಾಯ್ದೆ ಕಲಂ 117ಕ್ಕೆ ತಿದ್ದುಪಡಿ**:<br>ಕಾಯ್ದೆ ಕಲಂ 8(2)ರ ಪ್ರಸ್ತಾವಿಕ ತಿದ್ದುಪಡಿಯ ಹಿನ್ನಲೆಯಲ್ಲಿ, ಸಕ್ಷಮ ಅಧಿಕಾರಿಗಳಿಂದ ಅಧಿಸೂಚಿತ ಕೃಷಿ ಉತ್ಪನ್ನಗಳ ವ್ಯಾಪಾರವನ್ನು ನಿಯಂತ್ರಿಸುವ ಅಧಿಕಾರವನ್ನು ಜಾರಿಗೊಳಿಸಲು ದಂಡದ ನಿಬಂಧನೆಯು ಅಗತ್ಯವಿರುತ್ತದೆ. ಆದ್ದರಿಂದ, ತಿದ್ದುಪಡಿಯನ್ನು ಪ್ರಸ್ತಾಪಿಸಲಾಗಿದೆ.<br><br>ಪ್ರಸ್ತುತ ದಿನಾಂಕ:15.06.2023 ರಂದು ಮೇಲ್ಕಂಡ ಮಾರುಕಟ್ಟೆ ಕಾಯ್ದೆಗಳಿಗೆ ತಿದ್ದುಪಡಿ ಮಾಡಲು ಸಚಿವ ಸಂಪುಟದ ಅನುಮೋದನೆ ದೊರೆತಿದ್ದು, ಉಭಯ ಸದನಗಳಲ್ಲಿ ಸದರಿ ವಿಧೇಯಕಗಳನ್ನು ಮಂಡಿಸಿ ಅನುಮೋದನೆ ದೊರೆತ ನಂತರ ಕಾಯ್ದೆಗಳನ್ನು ಜಾರಿಗೊಳಿಸಲಾಗುವುದು. |
| (ಇ) | ದೊಡ್ಡ ಕೃಷಿ ಉತ್ಪನ್ನ ಕಂಪನಿಗಳು ರೈತರಿಂದ ಕೃಷಿ ಉತ್ಪನ್ನ ಖರೀದಿಸುವಾಗ ಎಪಿಎಂಸಿ ಗಳಿಂದ ಖರೀದಿ ಮಾಡುವುದನ್ನು ಕಡ್ಡಾಯ ಮಾಡಲಾಗುವುದೇ? | ಕರ್ನಾಟಕ ಕೃಷಿ ಉತ್ಪನ್ನ ಮಾರುಕಟ್ಟೆ ವ್ಯವಹಾರ (ನಿಯಂತ್ರಣ ಮತ್ತು ಅಭಿವೃದ್ಧಿ) ಅಧಿನಿಯಮ 1966ರ ಕಲಂ 8(2)ಕ್ಕೆ ರೈತ ಬೆಳೆಗಾರರ ಹಿತದೃಷ್ಟಿಯಿಂದ ಅಧಿಸೂಚಿತ ಕೃಷಿ ಉತ್ಪನ್ನಗಳ ಸಗಟು ವ್ಯಾಪಾರ ವಹಿವಾಟನ್ನು ಮಾರುಕಟ್ಟೆ ಪ್ರಾಂಗಣ, ಮಾರುಕಟ್ಟೆ ಉಪ ಪ್ರಾಂಗಣ, ಉಪ ಮಾರುಕಟ್ಟೆ ಪ್ರಾಂಗಣ, ಖಾಸಗಿ ಮಾರುಕಟ್ಟೆ ಪ್ರಾಂಗಣ ಅಥವಾ ರೈತ-ಗ್ರಾಹಕ ಮಾರುಕಟ್ಟೆ ಪ್ರಾಂಗಣಗಳಲ್ಲಿಯೇ ಕಡ್ಡಾಯವಾಗಿ ಖರೀದಿ ಹಾಗೂ ಮಾರಾಟ ಪ್ರಕ್ರಿಯೆ ನಡೆಸಬೇಕೆಂದು ಹಾಗೂ ಯಾವುದೇ ಇತರೆ ಸ್ಥಳವನ್ನು ಅಧಿಸೂಚಿತ ಕೃಷಿ ಉತ್ಪನ್ನಗಳ ಮಾರಾಟ ಹಾಗೂ ಖರೀದಿಗಾಗಿ ಉಪಯೋಗಿಸತಕ್ಕದ್ದಲ್ಲ ಎಂದು ತಿದ್ದುಪಡಿಗೆ ಪ್ರಸ್ತಾಪಿಸಲಾಗಿದೆ. |

ಸಂಖ್ಯೆ: ಸಿಒ 126 ಎಂಆರ್ಇ 2023

(ಶಿವಾನಂದ ಎಸ್. ಪಾಟೀಲ)
ಜವಳಿ, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ
ಹಾಗೂ ಕೃಷಿ ಮಾರುಕಟ್ಟೆ ಸಚಿವರು